# MARCH 27 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

- **ಇ–ಪುಸ್ತಕ, ಇ–ದಾಖಲೆಯಂತಹ ಆ್ಯಪ್ ಬಳಕೆಯ ಮೂಲಕ ಪರಿಸರ ಸ್ನೇಹಿ ಚುನಾವಣೆ ನಡೆಸಲು ಚುನಾವಣಾ ಆಯೋಗ ನಿರ್ದೇಶನ.**
- **ಲೋಕಸಭಾ ಚುನಾವಣೆ; ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಅಧಿಕಾರಿಗಳಿಂದ ಕಟ್ಟುನಿಟ್ಟಿನ ಕ್ರಮ.**
- **ರಾಜ್ಯದ ವಿವಿಧೆಡೆ ಮತದಾನದ ಕುರಿತು ಜಾಗೃತಿ ಮೂಡಿಸಲು ಸ್ವೀಪ ಸಮಿತಿಯಿಂದ ವೈವಿಧ್ಯಮಯ ಕಾರ್ಯಕ್ರಮ.**
- **ಇಂದು ವಿಶ್ವ ರಂಗಭೂಮಿ ದಿನ.**

**ಈಗ ವಾರ್ತೆಗಳ ವಿವರ**

**ಲೋಕಸಭಾ ಮತ್ತು ವಿಧಾನಸಭಾ ಚುನಾವಣೆಗಳಲ್ಲಿ** ಪರಿಸರ ಸಂರಕ್ಷಣೆಯ ದೃಷ್ಟಿಯಿಂದ ಕಾಗದದ ಬಳಕೆಯನ್ನು ಆದಷ್ಟು ಕಡಿಮೆ ಮಾಡುವಂತೆ ರಾಜಕೀಯ ಪಕ್ಷಗಳು ಹಾಗೂ ಚುನಾವಣಾ ಸಿಬ್ಬಂದಿಗೆ, ಚುನಾವಣಾ ಆಯೋಗ ನಿರ್ದೇಶನ ನೀಡಿದೆ. ನಿಯಂತ್ರಿತ ಕಾಗದ ಬಳಕೆ ಜೊತೆಗೆ ವಿದ್ಯುನ್ಮಾನ ಸಂವಹನ ವಿಧಾನಗಳನ್ನು ಉತ್ತೇಜಿಸಲು ಈ ಕ್ರಮ ಕೈಗೊಳ್ಳಲಾಗಿದ್ದು, ಕಾಗದದ ಎರಡೂ ಬದಿ ಮುದ್ರಿಸುವುದು, ಇ–ಪುಸ್ತಕ, ಇ–ದಾಖಲೆಯಂತಹ ಆ್ಯಪ್‌ಗಳ ಬಳಸುವಿಕೆಯ ಮೂಲಕ ಪರಿಸರ ಸ್ನೇಹಿ ಚುನಾವಣೆ ನಡೆಸಲು ಆಯೋಗ ನಿರ್ದೇಶಿಸಿದೆ. ಚುನಾವಣಾ ಸಿಬ್ಬಂದಿ ಹಾಗೂ ರಾಜಕೀಯ ಪಕ್ಷಗಳಿಗೆ ಏಕ ಬಳಕೆಯ ಪ್ಲಾಸ್ಟಿಕ್ ಅನ್ನು ಸಂಪೂರ್ಣವಾಗಿ ತ್ಯಜಿಸಲು ಹೇಳಿರುವ ಆಯೋಗ, ಮತಗಟ್ಟೆಗಳಲ್ಲಿ ಪ್ರತ್ಯೇಕ ಕಸ ಸಂಗ್ರಹಣೆ ತೊಟ್ಟಿಗಳು ಹಾಗೂ ಸರಿಯಾದ ಚಿಹ್ನೆ ಇರುವುದನ್ನು ಖಾತ್ರಿಪಡಿಸಿಕೊಳ್ಳಬೇಕು ಎಂದು ಸೂಚಿಸಿದೆ. ಸಾರಿಗೆಗಾಗಿ ಪರಿಸರ ಸ್ನೇಹಿ ವಾಹನಗಳನ್ನು ಉತ್ತೇಜಿಸುವುದರ ಜೊತೆಗೆ, ಮತದಾನದ ಸಮಯದಲ್ಲಿ ಸಾರ್ವಜನಿಕ ಸಾರಿಗೆಯ ಬಳಕೆಗೆ ಪ್ರೋತ್ಸಾಹಿಸಲು ಆಯೋಗ ಸಲಹೆ ನೀಡಿದೆ. ಪ್ರಚಾರ ಕಾರ್ಯಕ್ರಮಗಳಿಗೆ ನವೀಕರಿಸಬಹುದಾದ ಇಂಧನದ ಬಳಕೆಯನ್ನು ಉತ್ತೇಜಿಸಲು ರಾಜಕೀಯ ಪಕ್ಷಗಳಿಗೆ ನಿರ್ದೇಶನಗಳನ್ನು ನೀಡಿದೆ.

*******

**ಲೋಕಸಭಾ ಚುನಾವಣೆ ಹಿನ್ನೆಲೆ,** ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ರಾಜ್ಯಾದ್ಯಂತ ವಿವಿಧ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ. ಯಾವುದೇ ಧಾರ್ಮಿಕ ಸ್ಥಳಗಳಲ್ಲಿ ಚುನಾವಣಾ ಪ್ರಚಾರ ನಡೆಸುವುದನ್ನು ಪ್ರಜಾಪ್ರತಿನಿಧಿ ಕಾಯ್ದೆಯ ಪ್ರಕಾರ ನಿ ೀಧಿಸಲಾಗಿದೆ ಎಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ದೇವಾಲಯ, ಚರ್ಚ್, ಮಸೀದಿ ಹಾಗೂ ಪ್ರಾರ್ಥನಾ ಸ್ಥಳಗಳಲ್ಲಿ ರಾಜಕೀಯ ಪಕ್ಷಗಳು ಹಾಗೂ ಪಕ್ಷದ ಕಾರ್ಯಕರ್ತರು ಪ್ರಚಾರ ನಡೆಸುವುದನ್ನು ನಿ ೀಧಿಸಲಾಗಿದೆ ಎಂದು ಹೇಳಿದ್ದಾರೆ. ಧಾರವಾಡ ಕೃಷಿ ವಿಶ್ವ ವಿದ್ಯಾಲಯದ ಚೆಕ್‌ಪೋಸ್ಟ್ ಬಳಿ ತಪಾಸಣೆ ವೇಳೆ ವಾಹನದಲ್ಲಿ ಸೂಕ್ತ ದಾಖಲೆಗಳಿಲ್ಲದೆ ಸಾಗಾಟ ಮಾಡುತ್ತಿದ್ದ 3 ಲಕ್ಷ 35 ಸಾವಿರದ 500 ರೂಪಾಯಿ ಮೌಲ್ಯದ ಪ್ಯಾಂಟ್ ಪೀಸ್ ಬಟ್ಟೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಮಾಹಿತಿ ನೀಡಿದ್ದಾರೆ. ಬಾಗಲಕೋಟೆ ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ ಹುನಗುಂದ ತಾಲೂಕಿನ ನಂದವಾಡಗಿ ಹಾಗೂ ಬಾಗಲಕೋಟೆ ತಾಲೂಕಿನ ಹೊನ್ನಾಕಟ್ಟಿ ಚೆಕ್‌ಪೋಸ್ಟ್‌ಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ಮಂಗಳೂರು ಕಮಿ ನರೇಟ್ ವ್ಯಾಪ್ತಿಯಲ್ಲಿ ವಿವಿಧ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿರುವ 13 ಮಂದಿಯನ್ನು ನಿನ್ನೆ ಗಡಿಪಾರು

ಮಾಡಲಾಗಿದೆ. ಇದರೊಂದಿಗೆ ಇದುವರೆಗೆ ಒಟ್ಟು 48 ಮಂದಿಯನ್ನು ಗಡಿಪಾರು ಮಾಡಿದಂತಾಗಿದೆ ಎಂದು ಮಂಗಳೂರು ನಗರ ಪೊಲೀಸ್ ಆಯುಕ್ತ ಅನುಪಮ್‌ಅಗರ್ ವಾಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಪರಾಧ ಹಿನ್ನೆಲೆಯುಳ್ಳ 480 ಮಂದಿಯಿಂದ ಬಾಂಡ್ ಪಡೆಯಲಾಗಿದೆ. ಅಲ್ಲದೆ ನಾಲ್ವರ ವಿರುದ್ಧ ಗೂಂಡಾ ಕಾಯ್ದೆ ಹೇರಲಾಗಿದೆ. ಈ ಆರೋಪಿಗಳ ವಿರುದ್ಧ ಕೊಲೆ, ಕೊಲೆ ಯತ್ನ, ಅಪಹರಣ ಮೊದಲಾದ 10 ಕ್ಕಿಂತ ಅಧಿಕ ಪ್ರಕರಣಗಳಿವೆ. ಚುನಾವಣೆ ಹಿನ್ನೆಲೆಯಲ್ಲಿ ಗಡಿಭಾಗಗಳಲ್ಲಿ ಚೆಕ್ ಪೋಸ್ಟ್‌ಗಳನ್ನು ತೆರೆಯಲಾಗಿದ್ದು, ತಪಾಸಣೆ ಬಿಗಿಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ. ವಿಜಯನಗರ ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ಗ್ರಾಮೀಣ ಪ್ರದೇಶದಲ್ಲಿ ಸಂಚರಿಸಿ ಲೋಕಸಭಾ ಚುನಾವಣೆಯ ಸಿದ್ಧತೆ ಹಾಗೂ ಕೂಡ್ಲಿಗಿ ವಿಧಾನಸಭಾ ಕ್ಷೇತ್ರದ ಆಲೂರ ಚೆಕ್‌ಪೋಸ್ಟ್‌ಗೆ ತೆರಳಿ ಅಲ್ಲಿನ ಸ್ಥಿತಿಗತಿಯನ್ನು ಪರಿಶೀಲಿಸಿದರು.

*******

**ಲೋಕಸಭಾ ಚುನಾವಣೆ ಹಿನ್ನೆಲೆ** ರಾಜ್ಯದ ವಿವಿಧೆಡೆ, ಮತದಾನದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಮತದಾನ ಜಾಗೃತಿ ಅಂಗವಾಗಿ ಇಂದು ವಾಕ್‌ಥಾನ್ ಹಾಗೂ ಕಲಾ ತಂಡದ ಜಾಥಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಧಾರವಾಡ ಜಿಲ್ಲಾ ಸ್ವೀಪ್ ಸಮಿತಿಯ ನೊಡಲ್ ಅಧಿಕಾರಿ ಸ್ವರೂಪ ಟಿ.ಕೆ. ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಏಪ್ರಿಲ್ 26 ರಂದು ಪ್ರತಿಯೊಬ್ಬ ಮತದಾರರು ಮತದಾನ ಕೇಂದ್ರಕ್ಕೆ ತೆರಳಿ ತಪ್ಪದೇ ಮತದಾನ ಮಾಡಬೇಕು ಎಂದು ಉಡುಪಿ ಜಿಲ್ಲಾಧಿಕಾರಿ ಡಾಕ್ಟರ್ ಕೆ ವಿದ್ಯಾಕುಮಾರಿ ತಿಳಿಸಿದ್ದಾರೆ. ಚಾಮರಾಜನಗರ ಜಿಲ್ಲೆಯಲ್ಲಿ ಮತದಾನದ ಪ್ರಮಾಣವನ್ನು ಹೆಚ್ಚಿಸಲು ಹಾಗೂ ಯಾವುದೇ ಮತದಾರರು ಮತದಾನದಿಂದ ವಂಚಿತರಾಗದಂತೆ ಜಾಗೃತಗೊಳಿಸಲು ಚಾಮರಾಜನಗರದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ವಿವಿಧ ಮಹಿಳಾ ಕಲಾ ತಂಡಗಳೊಂದಿಗೆ ಜಾಥಾ ನಡೆಸಿ ಸಾರ್ವಜನಿಕರಲ್ಲಿ ಮತದಾನದ ಬಗ್ಗೆ ಜಾಗೃತಿ ಮೂಡಿಸಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಪುರಸಭಾ ವ್ಯಾಪ್ತಿಯಲ್ಲಿ ಕಡಿಮೆ ಮತದಾನವಾಗಿರುವ ಪ್ರಮುಖ ಬೀದಿ ಹಾಗೂ ಪ್ರದೇಶಗಳಲ್ಲಿ ತಾಂಬೂಲದೊಂದಿಗೆ ತಮಟೆ ಬಾರಿಸುವ ಮೂಲಕ ವಿನೂತನವಾಗಿ ಮತದಾನ ಜಾಗೃತಿ ಮೂಡಿಸಲಾಯಿತು. ಪುರಸಭೆಯ ಮುಖ್ಯ ಅಧಿಕಾರಿ ಸಂತೋ ್ ಮಾತನಾಡಿ, ಎಲ್ಲಾ ಮತದಾರರು ಸಕ್ರಿಯವಾಗಿ ಚುನಾವಣೆಯಲ್ಲಿ ತಪ್ಪದೇ ಭಾಗವಹಿಸಿ ಅಮೂಲ್ಯವಾದ ಮತವನ್ನು ಚಲಾಯಿಸಬೇಕೆಂದು ಕರೆ ನೀಡಿದರು.

*******

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.**

*******

**ಮೈಸೂರು-ಕೊಡಗು ಲೋಕಸಭಾ ಕ್ಷೇತ್ರಕ್ಕೆ** ಸಂಬಂಧಿಸಿದಂತೆ ಮಾರ್ಚ್ 28 ರಂದು ಚುನಾವಣೆ ಅಧಿಸೂಚನೆ ಹೊರಡಿಸಲಿದ್ದು, ಅಂದಿನಿಂದಲೇ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಆರಂಭವಾಗಲಿದೆ. ನಾಮಪತ್ರ ಸಲ್ಲಿಸಲು ಏಪ್ರಿಲ್ 4 ಕೊನೆಯ ದಿನವಾಗಿದೆ. ಏಪ್ರಿಲ್ 5 ರಂದು ನಾಮಪತ್ರ ಪರಿಶೀಲನೆ ಕಾರ್ಯ ನಡೆಯಲಿದ್ದು, 8 ರಂದು ನಾಮಪತ್ರ ವಾಪಸ್ಸು ಪಡೆಯಲು ಕಡೆಯ ದಿನವಾಗಿದೆ. ಏಪ್ರಿಲ್ 26 ರಂದು ಮತದಾನ ನಡೆಯಲಿದ್ದು, ಜೂನ್ 4 ರಂದು ಮತ ಎಣಿಕೆ ಕಾರ್ಯ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ವೆಂಕಟ್ ರಾಜಾ ತಿಳಿಸಿದ್ದಾರೆ.

*******

**ಇಂದು ವಿಶ್ವ ರಂಗಭೂಮಿ ದಿನ. ಈ ದಿನವನ್ನು ಪ್ರತಿ ವ ್ ಮಾರ್ಚ್ 27 ರಂದು** ಆಚರಿಸಲಾಗುತ್ತದೆ. ಈ ದಿನದಂದು ರಂಗಭೂಮಿ ಕಲೆಗಳ ಸಾರ, ಸೌಂದರ್ಯ ಮತ್ತು ಪ್ರಾಮುಖ್ಯತೆ, ಮನರಂಜನೆಯಲ್ಲಿ ಅವರ ಮಹತ್ವದ ಪಾತ್ರವನ್ನು ತಿಳಿಸುತ್ತದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಧಾರವಾಡ ರಂಗಾಯಣ ಹಾಗೂ ವಿವಿಧ ಕಲಾ ಸಂಘಗಳ ಸಹಯೋಗದಲ್ಲಿ ಇಂದು ಧಾರವಾಡದ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ಭವನದಲ್ಲಿ ವಿಶ್ವ ರಂಗಭೂಮಿ ದಿನದ ಅಂಗವಾಗಿ 'ರಂಗಭೂಮಿ ಮತ್ತು ಶಾಂತಿಯುತ ಸಂಸ್ಕೃತಿ' ಪ್ರತೀಕವಾಗಿ ಎಚ್.ಎಸ್.ವೆಂಕಟ್ರೇಶಮೂರ್ತಿ ಅವರು ರಚಿಸಿದ 'ಅಗ್ನಿಪುತ್ರಿ' ನಾಟಕ ಮತ್ತು 'ಕೃಷ್ಣಂ ವಂದೇ ಜಗದ್ಗುರು' ಹಾಗೂ 'ಕೊನೆಯ ಅಂಕ' ಎಂಬ ಏಕವ್ಯಕ್ತಿ ರಂಗ ಪ್ರಯೋಗಗಳು ಪ್ರದರ್ಶನಗೊಳ್ಳಲಿವೆ. ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘವು, ನಾಡೋಜ ಡಾಕ್ಟರ್ ಏಣಗಿ ಬಾಳಪ್ಪ ಸ್ಮರಣಾರ್ಥ ಹಾಗೂ ವಿಶ್ವರಂಗಭೂಮಿ ದಿನದ ಅಂಗವಾಗಿ 'ದತ್ತಿಉಪನ್ಯಾಸ' ಮತ್ತು 'ರಂಗಗೌರವ' ಸಮಾರಂಭವನ್ನು ಇಂದು ಸಂಜೆ ರಾ.ಹ.ದೇಶಪಾಂಡೆ ಸಭಾಭವನದಲ್ಲಿ ಆಯೋಜಿಸಿದೆ ಎಂದು ಸಂಘದ ಪ್ರಕಟಣೆ ತಿಳಿಸಿದೆ. ವಿಜಯನಗರ ಶ್ರೀಕೃ ್ಣದೇವರಾಯ ವಿಶ್ವವಿದ್ಯಾಲಯದ ಪ್ರದರ್ಶನ ಕಲೆ ನಾಟಕ ವಿಭಾಗ, ಕನ್ನಡ ಮತ್ತು ಇಂಗ್ಲಿ ್ ಅಧ್ಯಯನ ವಿಭಾಗದ ಸಹಯೋಗದಲ್ಲಿ ವಿಶ್ವರಂಗಭೂಮಿ ದಿನದ ಅಂಗವಾಗಿ

"ರಂಗಭೂಮಿಯ ಕಾಲಾತೀತ ಅಸ್ತಿತ್ವ" ವಿ ´ಯದ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣವನ್ನು ಇಂದು ವಿಶ್ವವಿದ್ಯಾಲಯದ ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

*******

**ರಾಜ್ಯಾದಂತ ನಿನ್ನೆ ಸಡಗರ** ಸಂಭ್ರಮದಿಂದ ಹೋಳಿ ಹಬ್ಬವನ್ನು ಆಚರಿಸಲಾಯಿತು.
ಹೋಳಿ ಹಬ್ಬ ಬಣ್ಣದ ಸಂಕೇತ ಮಾತ್ರವಲ್ಲ, ಅದು ಬದುಕಿಗೆ ಬಣ್ಣ ತುಂಬಿ ಸಂತೋ ´ ಮೂಡಿಸುವ ಹಬ್ಬವಾಗಿದೆ. ಪ್ರತಿಯೊಬ್ಬರಲ್ಲಿ ಇರುವ ಅಜ್ಞಾನವನ್ನು ಕಳೆದು, ಸುಜ್ಞಾನ ಪಡೆದುಕೊಳ್ಳುವ ಸಂದರ್ಭ ಇದಾಗಿದೆ ಎಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದ್ದಾರೆ. ಯಾದಗಿರಿ ಜಿಲ್ಲೆಯಾದ್ಯಂತ 'ಬಣ್ಣದ ಆಟ' ಹೋಳಿ ಹಬ್ಬವನ್ನು ಜನರು ಸಡಗರ ಸಂಭ್ರಮದಿಂದ ಆಚರಿಸಿದರು.

*******

## ಈಗ ಸಂಕ್ಷಿಪ್ತ ಸುದ್ದಿಗಳು

**ಅಭಿವೃದ್ಧಿ ಹೆಸರಲ್ಲಿ** ಮರಗಳನ್ನು ಕಡಿಯುತ್ತಿರುವುದರಿಂದ ಮಳೆಯ ಪ್ರಮಾಣ ಕಡಿಮೆಯಾಗುತ್ತಿದೆ. ಆದ್ದರಿಂದ ಪ್ರತಿಯೊಬ್ಬರು ಗಿಡಗಳನ್ನು ನೆಟ್ಟು ಪೋಷಿಸುವ ಮೂಲಕ ಭವಿ ´ಃದಲ್ಲಿ ಉದ್ಭವಿಸಬಹುದಾದ ನೀರಿನ ಸಮಸ್ಯೆ ತಡೆಗಟ್ಟಲು ಸಹಕರಿಸಬೇಕು ಎಂದು ಉಡುಪಿಯ ಹಿರಿಯ ಸಿವಿಲ್ ನ್ಯಾಯಾಧೀಶೆ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶರ್ಮಿಳಾ ಎಸ್ ಹೇಳಿದ್ದಾರೆ.

*******

**ದಾರ್ಶನಿಕರ** ಜಯಂತಿಗಳನ್ನು ಆಚರಿಸುವ ಮೂಲಕ ಅವರ ತತ್ವಾದರ್ಶಗಳನ್ನು ಅರಿತು, ದೈನಂದಿನ ಜೀವನದಲ್ಲಿ ನಾವು ಅಳವಡಿಸಿಕೊಳ್ಳುವ ಮೂಲಕ ಆಚರಣೆಗಳನ್ನು ಅರ್ಥಪೂರ್ಣಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾಕ್ಟರ್ ಕೆ.ವಿದ್ಯಾಕುಮಾರಿ ಹೇಳಿದ್ದಾರೆ. ಉಡುಪಿಯಲ್ಲಿ ನಡೆದ ಶ್ರೀ ರೇಣುಕಾಚಾರ್ಯ ಮತ್ತು ಕೈವಾರ ತಾತಯ್ಯ ಜಯಂತಿಗಳಲ್ಲಿ ಅವರ ಭಾವಚಿತ್ರಗಳಿಗೆ ಗೌರವ ಸಲ್ಲಿಸಿ ಅವರು ಮಾತನಾಡಿದರು.

*******

**ಮಾಡಿದ ´ಃ ನೀಡು ಭಿಕ್ಷೆ ಎಂಬ ತತ್ವ ಸಂದೇಶ ಸಾರಿ, ಬರದ ನಾಡಿನಲ್ಲಿ ಜಲ** ಸಂರಕ್ಷಣೆಯ ಮಹತ್ವ ತಿಳಿಸಿದ ನಾಯಕನ ಹಟ್ಟಿಯ ಕಾಯಕ ಯೋಗಿ ಶ್ರೀ ಗುರು ತಿಪ್ಪೇರುದ್ರಸ್ವಾಮಿ ರಥೋತ್ಸವ ನಿನ್ನೆ ವಿಜೃಂಭಣೆಯಿಂದ ಜರುಗಿತು. ಕುಂಡದಲ್ಲಿ ಒಣ ಕೊಬ್ಬರಿ ಜ್ವಲಿಸಿ, ಲಕ್ಷಾಂತರ ಭಕ್ತರು ಭಕ್ತಿ ಭಾವ ಸಮರ್ಪಿಸಿದರು.

*******

**ಚಿತ್ರದುರ್ಗ ಲೋಕಸಭಾ** ಕ್ಷೇತ್ರದ ಚುನಾವಣೆಗೆ ಸಂಬಂಧಿಸಿದಂತೆ ಸಾಮಾನ್ಯ ವೀಕ್ಷಕರಾಗಿ ಹಿರಿಯ ಐಎಎಸ್ ಅಧಿಕಾರಿ ಮನೋಹರ್ ಮರಾಂಡಿ, ಚುನಾವಣಾ ವೆಚ್ಚ ವೀಕ್ಷಕರಾಗಿ ಪ್ರಜಕ್ತ ಪಿ.ಠಾಕೂರ್ ಹಾಗೂ ಕಾನೂನು ಸುವ್ಯವಸ್ಥೆಯ ವೀಕ್ಷಕರಾಗಿ ನಜ್ಮಲ್ ಹೊಡ ಅವರನ್ನು ನೇಮಿಸಿ ಆದೇಶ ಹೊರಡಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ತಿಳಿಸಿದ್ದಾರೆ.

*******

**ಏಪ್ರಿಲ್ 5 ರಂದು ಡಾಕ್ಟರ್ ಬಾಬು** ಜಗಜೀವನರಾಂ ಮತ್ತು ಏಪ್ರಿಲ್ 14 ಡಾಕ್ಟರ್ ಬಿ.ಆರ್.ಅಂಬೇಡ್ಕರ ಜಯಂತಿಗಳನ್ನು ಸರಳವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಶಿವಮೊಗ್ಗ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದ್ದಾರೆ.

*******

**ಗದಗ ಜಿಲ್ಲೆಯ ನಾಗಾವಿ ಗ್ರಾಮದ ಬಳಿ ಇರುವ** ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ ವಿಶ್ವವಿದ್ಯಾಲಯದಲ್ಲಿ ಎನ್. ಎಸ್. ಎಸ್. ರಾಷ್ಟ್ರೀಯ ಭಾವೈಕ್ಯತಾ ಶಿಬಿರವನ್ನು ನಿವೃತ್ತ ಏರ್ ಕಮಾಂಡರ್ ಸಿ.ಎಸ್. ಹವಾಲ್ದಾರ್ ಉದ್ಘಾಟಿಸಿದರು. 'ನೀರು ಉಳಿಸಿ, ಪಕ್ಷಿ ಸಂಕುಲ ರಕ್ಷಿಸಿ' ಎಂಬ ಧ್ಯೇಯ ವಾಕ್ಯದೊಂದಿಗೆ ಶಿಬಿರದ ಕಾರ್ಯಚಟುವಟಿಕೆಗಳು ಜರುಗಿದವು.

*******

**ನೈಸರ್ಗಿಕ ಕೃಷಿಯು ಕಡಿಮೆ**–ವೆಚ್ಚದ ಕೃಷಿಯಿಂದ ಸುಸ್ಥಿರತೆಯೆಡೆಗೆ ರೈತರನ್ನು ಉತ್ತೇಜಿಸುವುದರೊಂದಿಗೆ, ರಾಸಾಯನಿಕ ಗೊಬ್ಬರ ಮತ್ತು ಕೈಗಾರಿಕಾ ಕೀಟನಾಶಕಗಳ ಬಳಕೆಯನ್ನು ತೊಡೆದು ಹಾಕುತ್ತದೆ ಎಂದು ಕೆಳದಿ ಶಿವಪ್ಪನಾಯಕ ಕೃಷಿ ಹಾಗೂ ತೋಟಗಾರಿಕಾ ವಿಶ್ವ ವಿದ್ಯಾಲಯದ ವಿಸ್ತರಣಾಧಿಕಾರಿ ಡಾಕ್ಟರ್ ಕೆ.ಟಿ ಗುರುಮೂರ್ತಿ ತಿಳಿಸಿದ್ದಾರೆ. ಶಿವಮೊಗ್ಗದ ನವುಲೆ ಕೆಳದಿ ಶಿವಪ್ಪನಾಯಕ ಕೃಷಿ ಹಾಗೂ ತೋಟಗಾರಿಕಾ ವಿಶ್ವವಿದ್ಯಾಲಯದಲ್ಲಿ ಗ್ರಾಮೀಣ ಭಾಗಗಳಲ್ಲಿ ಕೃಷಿಕರ ಏಳಿಗೆಗಾಗಿ ಶ್ರಮಿಸುವ ಸಮುದಾಯ ಸಂಪನ್ಮೂಲ ವ್ಯಕ್ತಿಗಳಾದ ಕೃಷಿಸಖಿಯರಿಗೆ ಆಯೋಜಿಸಲಾಗಿದ್ದ ನೈಸರ್ಗಿಕ ಕೃಷಿಯ ಬಗ್ಗೆ 5 ದಿನಗಳ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

*******